I/362486/2022

**ಕರ್ನಾಟಕ ಸರ್ಕಾರ**
**GOVERNMENT OF KARNATAKA**

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)ರವರ ಕಚೇರಿ
Office of the
Principal Chief Conservator of Forests
(Head of Forest Force)

ಅರಣ್ಯ ಭವನ, 18ನೇ ಅಡ್ಡ ರಸ್ತೆ
ಮಲ್ಲೇಶ್ವರಂ, ಬೆಂಗಳೂರು-560003
Aranya Bhavan, 18th Cross
Malleshwaram, Bengaluru-03
Telephone: 080 23367123
Email:apccfpr@gmail.com

ಸಂಖ್ಯೆ: KFD/HOFF/A2(EST)/40/2021-PnR-KFD **E- 485960**

ದಿನಾಂಕ: 29-12-2022.

# ಅಧಿಕೃತ ಜ್ಞಾಪನಾ

**ವಿಷಯ :** ದಿನಾಂಕ:01-01-2020ರಿಂದ 09-12-2021ರವರೆಗೆ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ವೃಂದದ ರಾಜ್ಯಮಟ್ಟದ ಕರಡು ಜ್ಯೇಷ್ಠತ ಪಟ್ಟಿ (Draft Seniority List)ಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ :**
1. ಈ ಕಛೇರಿ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ. KFD/HOFF/A2(EST)/40/2021, ದಿನಾಂಕ: 21-06-2021.
2. ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957 ರ ನಿಯಮ-10.
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 106 ಸೆನೆನಿ 2021 ದಿನಾಂಕ:10.12.2021.

## ಪ್ರಸ್ತಾವನೆ:-

1. ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10ರನ್ವಯ ಪ್ರತಿಯೊಂದು ಸಾಲಿನಲ್ಲಿ ಪ್ರತಿಯೊಂದು ವೃಂದದಲ್ಲಿನ ಅಧಿಕಾರಿ/ಸಿಬ್ಬಂದಿಗಳ ಜ್ಯೇಷ್ಠತ ಪಟ್ಟಿ (Seniority List)ಯನ್ನು ತಯಾರಿಸುವುದು ಕಡ್ಡಾಯವಾಗಿರುತ್ತದೆ.

2. ಉಲ್ಲೇಖ(1)ರಲ್ಲಿನ ಈ ಕಚೇರಿಯ ಅಧಿಕೃತ ಜ್ಞಾಪನ ಪತ್ರದಲ್ಲಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK - ವ್ಯವಸ್ಥಾಪಕ (Manager) ವೃಂದದ ದಿನಾಂಕ: 27-04-1978 ರಿಂದ 31-12-2019 ರವರೆಗೆ ಜ್ಯೇಷ್ಠತ ನಿಯಮಗಳನ್ವಯ ರಾಜ್ಯಮಟ್ಟದ ಜ್ಯೇಷ್ಠತ ಪಟ್ಟಿ(Seniority List) ಯನ್ನು ಅಂತಿಮವಾಗಿ ಪ್ರಕಟಿಸಲಾಗಿರುತ್ತದೆ.

3. ಈ ಮಧ್ಯೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 106 ಸೆನೆನಿ 2021 ದಿನಾಂಕ:10.12.2021ರಲ್ಲಿ *"ರಾಜ್ಯ ಸಿವಿಲ್ ಸೇವೆಗಳಲ್ಲಿನ ಯಾವುದೇ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಸಂಬಂಧಿಸಿದ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ಅನುಪಾತ/ಪ್ರತಿಶತ ಪ್ರಮಾಣವನ್ನು ನಿಗದಿಪಡಿಸಿದ್ದಲ್ಲಿ, ನಿಗದಿಪಡಿಸಿದ ಅನುಪಾತ/ಪ್ರತಿಶತದನ್ವಯ ಹುದ್ದೆ ಆದಾರಿತವಾಗಿ ನೇರ ನೇಮಕಾತಿಗೆ ಮತ್ತು ಮುಂಬಡ್ತಿಗಳಿಗೆ ಒಟ್ಟು ಹುದ್ದೆಗಳನ್ನು ವರ್ಗೀಕರಣ ಮಾಡತಕ್ಕದ್ದು. ಈ ಉದ್ದೇಶಕ್ಕಾಗಿ ಆ ವೃಂದದಲ್ಲಿನ ಶಾಶ್ವತ ಹುದ್ದೆಗಳ ಜೊತೆಗೆ ತಾತ್ಕಾಲಿಕ ಹುದ್ದೆಗಳು ಸಹ ಒಳಗೊಂಡಿರುತ್ತವೆ. ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ಹುದ್ದೆಗಳನ್ನು ಮೇಲ್ಕಂಡಂತೆ ವರ್ಗೀಕರಿಸಿದ ನಂತರ ನೇರ ನೇಮಕಾತಿಗಾಗಿ ವರ್ಗೀಕರಿಸಿದ ಹುದ್ದೆಗಳನ್ನು ನೇರ ನೇಮಕಾತಿಯಿಂದಲೇ ಮತ್ತು ಮುಂಬಡ್ತಿಗಾಗಿ ವರ್ಗೀಕರಿಸಿದ ಹುದ್ದೆಗಳನ್ನು ಮುಂಬಡ್ತಿಯಿಂದಲೇ ಭರ್ತಿ ಮಾಡತಕ್ಕದ್ದು"* ಎಂದು ತಿಳಿಸಲಾಗಿದೆ. ಮುಂದುವರೆದು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:DPAR 48 SSR 75 ದಿನಾಂಕ: 05.07.1976ರಲ್ಲಿ ಬ್ಲಾಕ್ ಅವಧಿಯನ್ನು ವಿಂಗಡಿಸುವ ಕುರಿತು ಮಾರ್ಗಸೂಚಿಗಳನ್ನು ನಿಗದಿಪಡಿಸಿದ್ದು, ಈ ಅಧಿಕೃತ ಜ್ಞಾಪನದ ಕಂಡಿಕೆ 3 (c) ರಂತೆ ನೇರ ನೇಮಕಾತಿ ಮತ್ತು ಬಡ್ತಿಯ ನಡುವೆ ಅನುಪಾತವು ದಿನಾಂಕ:10.12.2021ರ ಆದೇಶದಂತೆ ಬದಲಾವಣೆಗೊಂಡಿದ್ದರಿಂದ

ದಿನಾಂಕ:01.01.2020ರಿಂದ ಆರಂಭವಾಗುವ ಬ್ಲಾಕ್ ಅವಧಿಯನ್ನು ದಿನಾಂಕ:09.12.2021ಕ್ಕೆ ಮುಕ್ತಾಯಗೊಳಿಸಬೇಕಾಗಿರುತ್ತದೆ.

4. ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10ರನ್ವಯ ಹಾಗೂ ಸರ್ಕಾರಿ ಆದೇಶಗಳು/ಸುತ್ತೋಲೆಗಳನ್ನು ಅನುಸರಿಸಿ ಹಾಗೂ ದಿನಾಂಕ: 01.01.2020 ರಿಂದ 09.12.2021ರವರೆಗಿನ ಅವಧಿಯಲ್ಲಿ ವ್ಯವಸ್ಥಾಪಕ ವೃಂದದಿಂದ ಆಡಳಿತ ಸಹಾಯಕ ವೃಂದಕ್ಕೆ ಬಡ್ತಿ ಹೊಂದಿದ ಅಧಿಕಾರಿಗಳನ್ನು ಒಳಗೊಂಡಂತೆ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ವೃಂದದ ರಾಜ್ಯಮಟ್ಟದ ಕರಡು ಜ್ಯೇಷ್ಠತ ಪಟ್ಟಿಯನ್ನು (Draft Seniority List) ಪ್ರಕಟಿಸಬೇಕಾಗಿರುತ್ತದೆ. ಆದ್ದರಿಂದ ದಿನಾಂಕ:01-01-2020 ರಿಂದ 09-12-2021ರವರೆಗಿನ ಅವಧಿಗೆ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ರಾಜ್ಯಮಟ್ಟದ ಕರಡು ಜ್ಯೇಷ್ಠತ ಪಟ್ಟಿ (Draft Seniority List)ಯನ್ನು ಅನುಬಂಧ-1 ಮತ್ತು ಅನುಬಂಧ-2ರ ಮಾಹಿತಿಯೊಂದಿಗೆ ಪ್ರಕಟಿಸಲು ತೀರ್ಮಾನಿಸಿ ಈ ಕೆಳಕಂಡ ಆದೇಶ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10ರನ್ವಯ ದಿನಾಂಕ:01-01-2020ರಿಂದ 09-12-2021ರವರೆಗಿನ ಅವಧಿಗೆ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ವೃಂದದ ರಾಜ್ಯ ಮಟ್ಟದ ಕರಡು ಜ್ಯೇಷ್ಠತ ಪಟ್ಟಿ (Draft Seniority List)ಯನ್ನು ಅನುಬಂಧಗಳಲ್ಲಿ ಪ್ರಕಟಿಸಿ ಆದೇಶಿಸಿದೆ.

ಈ ಕರಡು ಜ್ಯೇಷ್ಠತ ಪಟ್ಟಿಯ ಕುರಿತು ಬಾದಿತರಾದವರು ಆಕ್ಷೇಪಣೆಗಳನ್ನು **ಸ್ಪಷ್ಟ ರೀತಿಯಲ್ಲಿ ಪೂರಕ ಸಮರ್ಥನೀಯ ದಾಖಲಾತಿಗಳೊಂದಿಗೆ** ಇಲಾಖೆಯ ವೆಬ್ ಸೈಟ್ www.aranya.gov.inರಲ್ಲಿ ಈ ಆದೇಶವನ್ನು ಪ್ರಕಟಿಸಿದ 21 ದಿನಗಳೊಳಗಾಗಿ ಈ ಕಚೇರಿಯ ಸಂಬಂಧಿಸಿದ ಶಾಖೆಯ ಇ-ಮೇಲ್ ವಿಳಾಸ "a2secpccf@gmail.com" ಮೂಲಕ ಸಲ್ಲಿಸಬಹುದಾಗಿದೆ.

ಇತರೆ ಮಾಧ್ಯಮದ *[ಭೌತಿಕವಾಗಿ/ ಬೇರೆ ಇ-ಮೇಲ್ ಗಳಿಗೆ/ ದೂರವಾಣಿ/ ಸಾಮಾಜಿಕ ಮಾಧ್ಯಮ (Social media) ಮುಂತಾದ ಇತರೆ ಮಾಧ್ಯಮಗಳ]* ಮೂಲಕ ಕಳುಹಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಸ್ಪಷ್ಟಪಡಿಸಿದೆ. ಅಲ್ಲದೇ, ಅಸ್ಪಷ್ಟ ಆಕ್ಷೇಪಣೆಗಳನ್ನು ಹಾಗೂ ನಿಗದಿತ ದಿನಾಂಕ ಮೀರಿ ಸ್ವೀಕರಿಸಿದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**Signed by Raj Kishore Singh, Ifs**
**Date: 31-12-2022 18:41:15**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
(ಅರಣ್ಯ ಪಡೆ, ಮುಖ್ಯಸ್ಥರು)

**ಪ್ರತಿಯನ್ನು ಮಾಹಿತಿ ಹಾಗೂ ಮುಂದಿನಕ್ರಮಕ್ಕಾಗಿ:**

1. ಎಲ್ಲಾ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
2. ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
3. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮಾಹಿತಿ ಸಂವಹನ ತಂತ್ರಜ್ಞಾನ), ಅರಣ್ಯ ಭವನ, ಬೆಂಗಳೂರು- ಈ ಆದೇಶವನ್ನು ಇಲಾಖೆಯ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
4. ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
5. ಎಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
6. ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.

7. ಎಲ್ಲಾ ಅರಣ್ಯ ವ್ಯವಸ್ಥಾಪನಾಧಿಕಾರಿಗಳಿಗೆ.
8. ಎಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ.
9. ಎಲ್ಲಾ ವಲಯ ಅರಣ್ಯ ಅಧಿಕಾರಿಗಳಿಗೆ - *ಸಂಬಂಧಿಸಿದ ಉಪ ಅರಣ್ಯ ಸಂರಕ್ಷಣಾಧಿಕಾರಿ/ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಮುಖಾಂತರ.*
10. ಎಲ್ಲಾ ವ್ಯವಸ್ಥಾಪಕ (Manager) ವೃಂದದ ಸಿಬ್ಬಂದಿಗಳಿಗೆ – ಇಲಾಖಾ ವೆಬ್ಸೈಟ್ ನಲ್ಲಿ ಈ ಪ್ರಕಟಣೆ ಮೂಲಕ.

I/362487/2022

# ಅನುಬಂಧ -1
## ಭಾಗ-1

## ಹುದ್ದೆಗಳ ವಾಸ್ತವಿಕ ಮಾಹಿತಿ

## ದಿನಾಂಕ: 01.01.2020 ರಿಂದ 09.12.2021 ರವರೆಗಿನ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ವೃಂದದ ರಾಜ್ಯ ಮಟ್ಟ ವೃಂದದ ಕರಡು ಜ್ಯೇಷ್ಠತ ಪಟ್ಟಿ (Draft seniority List)

| ಕ್ರ. ಸಂ | ವೃಂದದ ಹೆಸರು | ಬ್ಲಾಕ್ ಅವಧಿ | | ಬ್ಲಾಕ್ ಅವಧಿಯಲ್ಲಿ ಉದ್ಭವವಾದ ರಿಕ್ತ ಸ್ಥಾನಗಳು | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿಗೆ ಮತ್ತು ಮುಂಬಡ್ತಿಗೆ ವರ್ಗೀಕರಿಸಲಾದ ಹುದ್ದೆಗಳ ಸಂಖ್ಯೆ | | ವಾಸ್ತವವಾಗಿ ಭರ್ತಿಮಾಡಲಾದ ಹುದ್ದೆಗಳ ಸಂಖ್ಯೆ | | ಹುದ್ದೆಗಳ ಅನುಪಾತ (Quota) ಮತ್ತು ಭರ್ತಿ ಮಾಡಲಾದ ಹುದ್ದೆಗಳ ನಡುವಿನ ಸಂಖ್ಯಾ ವ್ಯತ್ಯಾಸ | | | | ವಾಸ್ತವವಾಗಿ ಲಭ್ಯವಾಗುವ ಖಾಲಿ ಹುದ್ದೆಗಳ ಸಂಖ್ಯೆ | | ಷರಾ |
|---|---|---|---|---|---|---|---|---|---|---|---|---|---|---|---|
| | | ಇಂದ | ವರೆಗೆ | | | | | | ಹೆಚ್ಚುವರಿ | | ಕೊರತೆ | | | | |
| | | | | | ನೇರ | ಮುಂಬಡ್ತಿ | ನೇರ | ಮುಂಬಡ್ತಿ | ನೇರ | ಮುಂಬಡ್ತಿ | ನೇರ | ಮುಂಬಡ್ತಿ | ನೇರ | ಮುಂಬಡ್ತಿ | |
| **1** | **2** | **2A** | **2B** | **2C** | **3** | **4** | **5** | **6** | **7** | **8** | **9** | **10** | **11** | **12** | **13** |
| 1 | ವ್ಯವಸ್ಥಾಪಕರು (Manager) | 01.01. 2020 | 09.12. 2021 | 01 | - | 01 | - | 04 | - | 03 | - | 0 | - | 0 | ದಿನಾಂಕ:01-01-2020ರ ಹಿಂದಿನ ಅವಧಿಯಲ್ಲಿ 03 ವ್ಯವಸ್ಥಾಪಕರು ವಯೋ ನಿವೃತ್ತಿ/ಬಡ್ತಿ ಹೊಂದಿದ್ದು ಆ ಕಾರಣಕ್ಕಾಗಿ ಉದ್ಭವವಾದ ರಿಕ್ತಸ್ಥಾನಗಳನ್ನು ಈ ಬ್ಲಾಕ್ ಅವಧಿಯಲ್ಲಿ ಬಡ್ತಿ ಮೂಲಕ ಭರ್ತಿ ಮಾಡಲಾಗಿದೆ. |

ದಿನಾಂಕ:29-12-2022
ಸ್ಥಳ: ಬೆಂಗಳೂರು

**Signed by Raj Kishore Singh, Ifs**
**Date: 31-12-2022 18:41:41**
**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
(ಅರಣ್ಯ ಪಡೆ ಮುಖ್ಯಸ್ಥರು)

I/362488/2022

**ಅನುಬಂಧ-2**

**ನೇರ ನೇಮಕಾತಿ ಅಥವಾ ಮುಂಬಡ್ತಿ ಮುಖಾಂತರ ಒಂದೇ ವಿಧಾನದಿಂದ ನೇಮಕಾತಿ ಮಾಡುವ ವೃಂದಗಳಿಗೆ ದಿನಾಂಕ:01-01-2020 ರಿಂದ 09-12-2021 ರವರೆಗೆ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ವೃಂದದ ರಾಜ್ಯ ಮಟ್ಟ ವೃಂದದ ಕರಡು ಜ್ಯೇಷ್ಠತ ಪಟ್ಟಿ (Draft seniority List).**

1. **ಇಲಾಖೆ:** ಕರ್ನಾಟಕ ಅರಣ್ಯ ಇಲಾಖೆ
2. **ವೃಂದದ ಹೆಸರು:** ವ್ಯವಸ್ಥಾಪಕ (Manager)
3. **ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ(Local Cadre)-HK ದಲ್ಲಿನ ಒಟ್ಟು ಹುದ್ದೆಗಳ ಸಂಖ್ಯೆ: 7**
4. **ನೇಮಕಾತಿ ನಿಯಮಗಳ ಅನುಸಾರ ನೇಮಕಾತಿ ವಿಧಾನ:** ಮುಂಬಡ್ತಿ

ಈ ಕಛೇರಿಯ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: KFD/HOFF/A2(EST)/40/2021, ದಿನಾಂಕ: 21.06.2021ರಲ್ಲಿ ದಿನಾಂಕ: 27-04-1978 ರಿಂದ 31-12-2019 ರವರೆಗೆ ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಾವಳಿ 1957ರ ನಿಯಮ 10ರನ್ವಯ **ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)'** ವೃಂದದ ರಾಜ್ಯ ಮಟ್ಟದ ಜ್ಯೇಷ್ಠತಾ ಪಟ್ಟಿಯನ್ನು (ಜ್ಯೇಷ್ಠತಾ ಕ್ರಮ ಸಂಖ್ಯೆ 1 ರಿಂದ 8ರವರೆಗೆ) ಈಗಾಗಲೇ ಅಂತಿಮವಾಗಿ ಪ್ರಕಟಿಸಲಾಗಿರುತ್ತದೆ. ತದನಂತರ, ಈ ಕಛೇರಿಯ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: KFD/HOFF/A2(EST)/40/2021, ದಿನಾಂಕ: 27.06.2022ರನ್ವಯ ಜ್ಯೇಷ್ಠತಾ ಪಟ್ಟಿಯಲ್ಲಿ ಜ್ಯೇಷ್ಠತಾ ಕ್ರಮ ಸಂಖ್ಯೆ 6Aಅನ್ನು ಸೇರ್ಪಡೆ ಮಾಡಲಾಗಿರುತ್ತದೆ.

**ದಿನಾಂಕ: 01.01.2020 ರಿಂದ 09.12.2021 ರವರೆಗಿನ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ (Local Cadre)-HK 'ವ್ಯವಸ್ಥಾಪಕ (Manager)' ವೃಂದದ ರಾಜ್ಯಮಟ್ಟದ ಕರಡು ಜ್ಯೇಷ್ಠತ ಪಟ್ಟಿ (Draft seniority List).**

| ಕ್ರ. ಸಂ | ಜ್ಯೇಷ್ಠತ ಕ್ರ. ಸಂ. | ಹೆಸರು (ಶ್ರೀಯುತರು) | ಮೀಸಲಾತಿ ವರ್ಗ | ನೇರ / ಬಡ್ತಿ | ಜನ್ಮ ದಿನಾಂಕ | ಸೇವೆಗೆ ಸೇರಿದ ದಿನಾಂಕ | ನೈಜವಾಗಿ ಮುಂಬಡ್ತಿ ಹೊಂದಿದ ದಿನಾಂಕ | ಅರ್ಹತಾ ದಿನಾಂಕ |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| 1 | 9 | ಸುರೇಂದ್ರ ಸ್ವಾಮಿ | ಸಾಮಾನ್ಯ | ಬಡ್ತಿ | 06.07.1981 | 28.10.2005 | 31-07-2021 | 31-07-2021 |
| 2 | 10 | ಶಂಶುನ್ನೀಸಾ | ಸಾಮಾನ್ಯ | ಬಡ್ತಿ | 02.06.1982 | 30.01.2006 | 23-07-2021 | 23-07-2021 |
| 3 | 11 | ವೆಂಕಟೇಶ ಹೆಚ್. ಕಟ್ಟಿ | ಸಾಮಾನ್ಯ | ಬಡ್ತಿ | 12.05.1969 | 19.06.2006 | 28-07-2021 | 28-07-2021 |
| 4 | 12 | ಕುಮಾರ ಸ್ವಾಮಿ ಆರ್. ಬಿ. | ಪರಿಶಿಷ್ಟ ಪಂಗಡ | ಬಡ್ತಿ | 23.06.1970 | 31.07.2007 | 16-08-2021 | 16-08-2021 |

**ದಿನಾಂಕ:** 29-12-2022
**ಸ್ಥಳ:** ಬೆಂಗಳೂರು

Signed by Raj Kishore Singh, Ifs
Date: 31-12-2022 18:42:04

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ**
(ಅರಣ್ಯ ಪಡೆ ಮುಖ್ಯಸ್ಥರು)